# ಕರ್ನಾಟಕ ವಿಧಾನ ಪರಿಷತ್ತು

ಸಂಖ್ಯೆ:ಕವಿಪ:/ಆ-1/16//2018

ವಿಧಾನ ಪರಿಷತ್ತಿನ ಸಚಿವಾಲಯ,
ಅಂಚೆ ಪೆಟ್ಟಿಗೆ ಸಂಖ್ಯೆ:5079, ವಿಧಾನ ಸೌಧ,
ಬೆಂಗಳೂರು-560 001, ದಿನಾಂಕ: 15.07.2020

## ಸುತ್ತೋಲೆ

**ಉಲ್ಲೇಖ:** 1.ಸಂ:ಕವಿಪ/ಆ-1/16/ಸು/2020, ದಿನಾಂಕ:24.03.2020
2.ಸಂ:ಕವಿಪ/ಆ-1/16/ಸು/2020, ದಿನಾಂಕ:16.04.2020
3.ಸಂ:ಕವಿಪ/ಆ-1/16/ಸು/2020, ದಿನಾಂಕ:19.04.2020
4.ಸಂ:ಕವಿಪ/ಆ-1/16/ಸು/2020, ದಿನಾಂಕ:04.05.2020
5.ಸಂ:ಸಿಆಸುಇ/123/ಡಿಬಿಎಂ/2020, ದಿನಾಂಕ:02.05.2020
6.ಸಂ:ಸಿಆಸುಇ/123/ಡಿಬಿಎಂ/2020, ದಿನಾಂಕ:18.05.2020
7.ಕಂಇ:/157/ಟಿಎನ್ಆರ್/2020, ದಿನಾಂಕ:13.07.2020

****

ಕರ್ನಾಟಕ ರಾಜ್ಯದಲ್ಲಿ ಕೊರೋನ ವೈರಸ್ (ಕೋವಿಡ್-19) ಸಾಂಕ್ರಾಮಿಕವಾಗಿ ಹರಡುತ್ತಿರುವ ಕಾರಣ ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿರ್ದೇಶನ ನೀಡಿದ್ದು, ಪ್ರಸ್ತುತ ಬಿಬಿಎಂಪಿ ಪ್ರದೇಶ, ಬೆಂಗಳೂರು ನಗರ ಜಿಲ್ಲೆ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳನ್ನೊಳಗೊಂಡಿರುವ ಬೆಂಗಳೂರು ಪ್ರದೇಶದಲ್ಲಿ ದಿನಾಂಕ:14.07.2020 ರಾತ್ರಿ 8.00 ಗಂಟೆಯಿಂದ ದಿನಾಂಕ:22.07.2020ರ ಬೆಳಗ್ಗೆ 5.00 ಗಂಟೆಯವರೆಗೆ 7 ದಿನಗಳ ಅವಧಿಯವರೆಗೆ ಲಾಕ್‌ಡೌನ್ ಅನ್ನು ಜಾರಿಗೊಳಿಸಲು ಉಲ್ಲೇಖ 7ರಲ್ಲಿ ಆದೇಶಿಸಲಾಗಿರುತ್ತದೆ. ಸದರಿ ಆದೇಶದ ಮಾರ್ಗಸೂಚಿಯಲ್ಲಿ ವಿಧಾನ ಸೌಧ, ವಿಕಾಸ ಸೌಧ ಹಾಗೂ ಬಹುಮಹಡಿ ಕಟ್ಟಡಗಳಲ್ಲಿರುವ ಕಛೇರಿಗಳು ಶೇಕಡ 50 ಸಿಬ್ಬಂದಿಯೊಂದಿಗೆ ಕಾರ್ಯನಿರ್ವಹಿಸಬೇಕೆಂದು ಸೂಚಿಸಲಾಗಿರುತ್ತದೆ.

ಈ ಹಿನ್ನಲೆಯಲ್ಲಿ, ಸಚಿವಾಲಯದ ಎಲ್ಲಾ ಅಧಿಕಾರಿ/ನೌಕರರುಗಳ ಗಮನಕ್ಕೆ ತರುವುದೇನೆಂದರೆ, ತಮ್ಮ ತಮ್ಮ ಶಾಖೆಗಳಲ್ಲಿ ಬಾಕಿ ಉಳಿದಿರುವ ಅಥವಾ ತುರ್ತು ಸಂದರ್ಭವಿರುವ ಕೆಲಸ ಕಾರ್ಯಗಳನ್ನು ಶೇಕಡ 50 ಸಿಬ್ಬಂದಿಯ ಮಿತಿಯ ಒಳಗೆ ಎ, ಬಿ, ಸಿ ಮತ್ತು ಡಿ ಗುಂಪಿನ ಅಧಿಕಾರಿ/ನೌಕರರುಗಳು ಕಛೇರಿಗೆ ಹಾಜರಾಗಿ ಕರ್ತವ್ಯ ನಿರ್ವಹಿಸತಕ್ಕದ್ದು. ಆಯಾಯ ಶಾಖೆಯ ಸಂಬಂಧಪಟ್ಟ ಉಪ ಕಾರ್ಯದರ್ಶಿ/ಅಧೀನ ಕಾರ್ಯದರ್ಶಿಯವರು ತಮ್ಮ ಅಗತ್ಯತೆಗೆ ಅನುಗುಣವಾಗಿ ಅಗತ್ಯವಿರುವ ಸಿಬ್ಬಂದಿಗಳನ್ನು ಕರ್ತವ್ಯಕ್ಕೆ ಹಾಜರಾಗುವಂತೆ ಸೂಚಿಸುವುದು.

.....2

ಈ ಸಚಿವಾಲಯದ ಎಲ್ಲಾ ಅಧಿಕಾರಿ/ನೌಕರರುಗಳು ಕೇಂದ್ರ ಸ್ಥಾನದಲ್ಲಿ ಲಭ್ಯವಿರುವುದು ಹಾಗೂ ತುರ್ತು ಕೆಲಸಗಳಿದ್ದಾಗ ಮೇಲಾಧಿಕಾರಿಗಳು ಸೇವೆಯನ್ನು ಬಯಸಿದಲ್ಲಿ ಅಧಿಕಾರಿ/ನೌಕರರುಗಳು ಯಾವುದೇ ಕಾರಣ ನೀಡದೆ ಕಛೇರಿಗೆ ಹಾಜರಾಗತಕ್ಕದ್ದು.

ಶಾಸಕರ ಭವನದ ಕೆಲಸ ಕಾರ್ಯಗಳಿಗೆ ಸಂಬಂಧಿಸಿದಂತೆ ಅಧಿಕಾರಿ/ನೌಕರರುಗಳು ಅಲ್ಲಿನ ಕಾರ್ಯಗಳ ಅಗತ್ಯತೆಗನುಗುಣವಾಗಿ ಕ್ಷೇತ್ರಾಧಿಕಾರಿಯವರು ನಿಯೋಜಿಸಿದಂತೆ ಕಾರ್ಯನಿರ್ವಹಿಸುವುದು.

(ಕೆ.ಆರ್.ಮಹಾಲಕ್ಷ್ಮಿ)
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

ಗೆ:

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ ಎಲ್ಲಾ ಅಧಿಕಾರಿ/ನೌಕರರುಗಳಿಗೆ. (ಶಾಸಕರ ಭವನವೂ ಸೇರಿದಂತೆ)

ಪ್ರತಿಗಳು:

1. ಮಾನ್ಯ ಸಭಾಪತಿಯವರ ಆಪ್ತ ಕಾರ್ಯದರ್ಶಿ, ಕ.ವಿ.ಪ.,
2. ಮಾನ್ಯ ಉಪ ಸಭಾಪತಿಯವರ ಆಪ್ತ ಕಾರ್ಯದರ್ಶಿ, ಕ.ವಿ.ಪ.,
3. ಮಾನ್ಯ ವಿರೋಧ ಪಕ್ಷದ ನಾಯಕರ ಆಪ್ತ ಕಾರ್ಯದರ್ಶಿ, ಕ.ವಿ.ಪ.
4. ಮಾನ್ಯ ಸರ್ಕಾರಿ ಮುಖ್ಯ ಸಚೇತಕರ ಆಪ್ತ ಕಾರ್ಯದರ್ಶಿ, ಕ.ವಿ.ಪ.
5. ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರ ಆಪ್ತ ಕಾರ್ಯದರ್ಶಿ, ಕ.ವಿ.ಪ.
6. ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕ, ಕ.ವಿ.ಪ.
7. ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕ.ವಿ.ಪ.,
8. ಆಂತರಿಕ ಆರ್ಥಿಕ ಸಲಹೆಗಾರರು/ಆರ್ಥಿಕ ಅಧಿಕಾರಿಯವರಿಗೆ, ಕ.ವಿ.ಪ
9. ಸಿಸ್ಟಮ್ ಅನಾಲಿಸ್ಟ್, ಗಣಕ ಕೇಂದ್ರ, ಕ.ವಿ.ಪ
10. ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ ಹಾಗೂ ಶಾಸಕರ ಭವನದ ಸೂಚನಾ ಫಲಕಗಳಿಗೆ
11. ಸಂಬಂಧಪಟ್ಟ ಕಡತಕ್ಕೆ/ರಕ್ಷಾ ಕಡತಕ್ಕೆ